ಒ.ಎಸ್. ನಂ.32/2023
ಪಿಡಬ್ಲು-1

ದಿನಾಂಕ 25.10.2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದ

ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ. ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ತಯಾರಿಸಲು ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳನ್ನು ವಕೀಲರು ನನಗೆ ಗೊತ್ತಿರುವ ಭಾಷೆಯಲ್ಲಿ ಓದಿ ಹೇಳಿರುತ್ತಾರೆ.

ಸರ್ವೆ ನಂ.6/ಬಿ/3 ಕ್ಕೆ ಸಂಬಂಧಿಸಿದ ದಿನಾಂಕ 25.05.1993 ರ ಖರೀದಿ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ಮಾನಶಿವಣಗಿ ಗ್ರಾಮ ಸರ್ವೆ ನಂ.6/ಅ 2 ಕ್ಕೆ ಸಂಬಂಧಿಸಿದ 2005-06 ರಿಂದ 2013-14 ರವರೆಗಿನ 07 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-2 ರಿಂದ 8 ಎಂದು ಗುರುತಿಸಲಾಯಿತು. ಮಾನಶಿವಣಗಿ ಗ್ರಾಮ ಸರ್ವೆ ನಂ.6/4 ಕ್ಕೆ ಸಂಬಂಧಿಸಿದ 2021-22 ರಿಂದ 2023 ರವರೆಗಿನ 03 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-9 ರಿಂದ 11 ಎಂದು ಗುರುತಿಸಲಾಯಿತು. ಸರ್ವೆ ನಂ.6 ಕ್ಕೆ ಸಂಬಂಧಿಸಿದ ಒಂದು ಆಕಾರಬಂದನ್ನು ಹಾಜರುಪಡಿಸಿದ್ದು ಅದನ್ನು ನಿಪಿ-12 ಎಂದು ಗುರುತಿಸಲಾಯಿತು. ಸರ್ವೆ ನಂ.6 ಕ್ಕೆ ಸಂಬಂಧಿಸಿದ ನಮೂನೆ-10 ನ್ನು ಹಾಜರುಪಡಿಸಿದ್ದು ಅದನ್ನು ನಿಪಿ-13 ಎಂದು ಗುರುತಿಸಲಾಯಿತು. ಸರ್ವೆ ನಂ.6/4 ಕ್ಕೆ ಸಂಬಂಧಿಸಿದ ಸ್ಕೆಚ್ ನಕಾಶೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-14 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೇಳಿದ್ದರಿಂದ ಮುಂದೂಡಲಾಯಿತು.

ಮರುವಿಚಾರಣೆಃ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ.ಸರಿ.ಇದೆ.

ಸಿವಿಲ್ ನ್ಯಾಯಾಧೀಶರು
ಜೇವರ್ಗಿ